# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 395(528) |
| ಸದಸ್ಯರ ಹೆಸರು | : ಡಾ: ವೈ ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 19.02.2024 |
| ಉತ್ತರಿಸಬೇಕಾದ ಸಚಿವರು | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 1987 ರಿಂದ 1995 ವರೆಗಿನ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಆದೇಶವಾಗಿದ್ದು, ಆ ಆದೇಶದಂತೆ ಎಲ್ಲಾ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆಯೇ? | ಆದೇಶ ಸಂಖ್ಯೆ: 1) ಇಡಿ 59 ಪಿಎಂಸಿ 2006 ದಿನಾಂಕ: 06-10-2007,<br>2) ಇಡಿ 217 ಪಿಎಂಸಿ 2008 ದಿನಾಂಕ: 08-09-2008 ಹಾಗೂ<br>3) ಇಡಿ 63 ಟಿಪಿಯು 2003 ದಿನಾಂಕ: 07-05-2007ರ<br><br>ಆದೇಶಗಳನ್ವಯ ಅನುದಾನ ರಹಿತ ಅರ್ಹ ಪ್ರಾಥಮಿಕ/ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿರುತ್ತದೆ. |
| ಆ) | ಈ ಅವಧಿಯಲ್ಲಿ ಪ್ರಾರಂಭಗೊಂಡ ಅನುದಾನಕ್ಕೆ ಒಳಪಡಿಸಲು ಬಾಕಿಯಿರುವ ಶಾಲಾ ಕಾಲೇಜುಗಳನ್ನು ಯಾವ ಕಾರಣಕ್ಕಾಗಿ ತಡೆಹಿಡಿಯಲಾಗಿದೆ; ಯಾವಾಗ ಅನುದಾನಕ್ಕೆ ಒಳಪಡಿಸಲಾಗುವುದು; | ಅನುದಾನಕ್ಕೆ ಒಳಪಡಿಸಲು ವಿಧಿಸಿರುವ ಮಾನದಂಡಗಳನ್ನು ಪೂರೈಸದೆ ಇರುವಂತಹ ಮತ್ತು ನಿಗಧಿತ ಕಾರ್ಯಭಾರ ಹೊಂದಿಲ್ಲದೆ ಇರುವುದರಿಂದ ಹಾಗೂ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು / ಉಪನ್ಯಾಸಕರು ನಿಗಧಿತ ವಿದ್ಯಾರ್ಹತೆ ಹೊಂದಿರದ ಹಾಗೂ ಸರ್ಕಾರವು ನಿಗಧಿಪಡಿಸಿದ ನಿರ್ದಿಷ್ಟ ದಿನಾಂಕದೊಳಗಡೆ ಶಾಲಾ/ಕಾಲೇಜುಗಳ ಆಡಳಿತ ಮಂಡಳಿಗಳು ಅನುದಾನಕ್ಕೆ ಒಳಪಡಿಸಲು ಪ್ರಸ್ತಾವನೆ ಸಲ್ಲಿಸದೇ ಇರುವುದರಿಂದ ಅಂತಹ ಶಾಲೆ/ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಿರುವುದಿಲ್ಲ. |
| ಇ) | 1995ರ ನಂತರ ಪ್ರಾರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಇರುವ ಸಮಸ್ಯೆಗಳೇನು; ಯಾವ ಕಾರಣಕ್ಕಾಗಿ ಅನುದಾನಕ್ಕೆ ಒಳಪಡಿಸಲು ಪ್ರಸ್ತಾವನೆ ನಿಧಾನಗತಿಯಲ್ಲಿ ಸಾಗುತ್ತಿದೆ; ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಯಾವ ಕಾಲಮಿತಿಯಲ್ಲಿ ಅನುದಾನಕ್ಕೆ ಒಳಪಡಿಸಲಾಗುವುದು? | 1995ರ ನಂತರ ಆರಂಭವಾದ ಅನುದಾನ ರಹಿತ ಕನ್ನಡ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಹಿಂದಿನ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ, ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಏರ್ಪಡಿಸಲಾಗಿದ್ದ ಸಭೆಯಲ್ಲಿ, 1995 ರಿಂದ 2019 ರವರೆಗೆ ಪ್ರತಿ 05 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳೆಷ್ಟು? ಸದರಿ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು / |

| | | |
|---|---|---|
| | | ಉಪನ್ಯಾಸಕರುಗಳು / ಬೋಧಕೇತರರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಕ್ರೋಢೀಕೃತ ಮಾಹಿತಿಯನ್ನು ಪಡೆಯಲು ತೀರ್ಮಾನಿಸಲಾಯಿತು. ಅದರಂತೆ, ಎಲ್ಲಾ ಮೂರು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಮಾಹಿತಿಯನ್ನು ಪಡೆಯಲು ಕ್ರಮವಹಿಸಲಾಗಿರುತ್ತದೆ. |

ಸಂಖ್ಯೆ: ಇಪಿ 35 ಪಿಎಂಸಿ 2024

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.